**DW-3**: ಗೋವಿಂದಪ್ಪ

ದಿನಾಂಕಃ **12.08.2025** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನವನ್ನು ಭೋದಿಸಲಾಯಿತು.

**ಮುಖ್ಯ ವಿಚಾರಣೆಃ ಪ್ರತಿವಾದಿ ಪರವಾಗಿ ಶ್ರೀ ಪಿ.ವಿ.ವೈ. ವಕೀಲರಿಂದಃ**

ನಾನು ಮುಖ್ಯ ವಿಚಾರಣೆ ಪ್ರಮಾಣಪತ್ರವನ್ನು ಸಲ್ಲಿಸಿದ್ದು ಅದರಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿದ್ದು ಅವುಗಳನ್ನು ನಾನೇ ಹೇಳಿ ಬರೆಯಿಸಿರುತ್ತೇನೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

ನನ್ನ ಪರವಾಗಿ ನ್ಯಾಯಾಲಯದ ಮುಂದೆ ಹಾಜರುಪಡಿಸಿರುವ ದಾಖಲಾತಿಗಳನ್ನು ನಿಶಾನೆಗೊಳಿಸಬೇಕಾಗಿ ವಿನಂತಿ.

ದಿನಾಂಕಃ 20.03.1970 ರ ವಿಭಾಗಪತ್ರವು ನನ್ನ ಮತ್ತು ನನ್ನ ಸಹೋದರರ ನಡುವೆ ಬರೆಯಲಾಗಿರುತ್ತದೆ. ಸದರಿ ವಿಭಾಗಪತ್ರವನ್ನು ನಿಡಿ. 56 ಎಂದು ಗುರುತಿಸಲಾಯಿತು. ನಿಡಿ. 56 ರಲ್ಲಿ ನನ್ನ ಸಹಿ ಇರುತ್ತದೆ. ಸದರಿ ಸಹಿಯನ್ನು ನಿಡಿ. 56(ಎ) ಎಂದು ಗುರುತಿಸಲಾಯಿತು. ಸದರಿ ವಿಭಾಗಪತ್ರಕ್ಕೆ ಚೆನ್ನಪ್ಪ, ಹನುಮಂತರೆಡ್ಡಿ, ದೊಡ್ಡ ಅಕ್ಕಲಪ್ಪ ಮತ್ತು ಸಕ್ರಪ್ಪ ರವರು ಸಾಕ್ಷಿದಾರರಾಗಿ ತಮ್ಮ ಹೆಬ್ಬೆರಳಿನ ಗುರುತನ್ನು ಹಾಕಿರುತ್ತಾರೆ.

(ವಾದಿ ಪರ ವಕೀಲರು ಪಾಟೀ ಸವಾಲಿಗೆ ಕಾಲವಕಾಶ ಕೋರಿದ್ದು ಅನುಮತಿ ನೀಡಿ ಪಾಟೀ ಸವಾಲಿಗೆ ಮುಂದೂಡಲಾಯಿತು)

**(ನನ್ನ ಉಕ್ತಲೇಖನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

ಓ.ಹೇ.ಕೇ.ಸರಿ ಇದೆ.

Sd/-

ಹಿರಿಯ ಸಿವಿಲ್ ಜಡ್ಜ್ ಮತ್ತು ಜೆಎಂಎಫ್.ಸಿ.

ಪಾವಗಡ.